ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 7/11/20

# ಪರಿಷತ್‌ನಲ್ಲೂ ಬಿಜೆಪಿ ಪತಾಕೆ

## 4 ಸ್ಥಾನಗಳಲ್ಲಿ 3 ಬಿಜೆಪಿ ಪಾಲು

ಬೆಂಗಳೂರು: ರಾಜ್ಯದ ನಾಲ್ಕು ವಿಧಾನಪರಿಷತ್ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲೂ ಬಿಜೆಪಿ ಭರ್ಜರಿ ಜಯ ಸಾಧಿಸಿದೆ. ಒಟ್ಟು ನಾಲ್ಕು ಕ್ಷೇತ್ರಗಳಿಗೆ ಚುನಾವಣೆ ನಡೆದಿದ್ದು ಮೂರರಲ್ಲಿ ಬಿಜೆಪಿ ಗೆದ್ದಿದೆ. ಇನ್ನೊಂದು ಕ್ಷೇತ್ರದ ಮತಎಣಿಕೆ ಮುಂದುವರಿದಿದೆ.

ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿಯ ಪುಟ್ಟಣ್ಣ ಜಯಗಳಿಸಿದ್ದಾರೆ. ಜೆಡಿಎಸ್‌ನ ಎ.ಪಿ.ರಂಗನಾಥ್ ವಿರುದ್ಧ 2,228 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

ಅತ್ತ ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿಯ ಶಶಿಲ್ ನಮೋಶಿ ಗೆಲುವು ಸಾಧಿಸಿದ್ದಾರೆ. ಇಲ್ಲಿ ಪಾಲಿ ಅಭ್ಯರ್ಥಿ ಶರಣಪ್ಪ ಮಟ್ಟೂರ ವಿರುದ್ಧ ಗೆದ್ದಿದ್ದಾರೆ. ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಬಿಜೆಪಿಯ ಎಸ್.ವಿ.ಸಂಕನೂರ ಗೆಲುವು ಪಡೆದಿದ್ದಾರೆ. ಇಲ್ಲಿನ ಕಾಂಗ್ರೆಸ್ ಅಭ್ಯರ್ಥಿ ಕುಬೇರಪ್ಪ ವಿರುದ್ಧ ಭಾರೀ ಅಂತರದ ಗೆಲುವು ಸಾಧಿಸಿದ್ದಾರೆ.

ಆಗ್ನೇಯ ಪದವೀಧರ ಕ್ಷೇತ್ರದ ಮತ ಎಣಿಕೆ ಪ್ರಗತಿಯಲ್ಲಿದೆ.

**ಬೆಂಗಳೂರು ಶಿಕ್ಷಕರ ಕ್ಷೇತ್ರ**

- ಪುಟ್ಟಣ್ಣ ಬಿಜೆಪಿ-7335
- ಎ.ಪಿ.ರಂಗನಾಥ್ ಜೆಡಿಎಸ್-5107
- ಪ್ರವೀಣ್ ಪೀಟರ್ ಕಾಂಗ್ರೆಸ್-782
- ಅಂತರ- 2,228

**ಈಶಾನ್ಯ ಶಿಕ್ಷಕರ ಕ್ಷೇತ್ರ**

- ಶಶಿಲ್ ನಮೋಶಿ ಬಿಜೆಪಿ-10,110
- ಶರಣಪ್ಪ ಮಟ್ಟೂರ ಕಾಂಗ್ರೆಸ್-7072
- ಅಂತರ - 3,138

**ಪಶ್ಚಿಮ ಪದವೀಧರ ಕ್ಷೇತ್ರ**

- ಎಸ್.ವಿ.ಸಂಕನೂರ ಬಿಜೆಪಿ-23,857
- ಕುಬೇರಪ್ಪ ಕಾಂಗ್ರೆಸ್-12,448
- ಬಸವರಾಜ(ಜೆಡಿಎಸ್ ಬೆಂಬಲಿತ)-6188
- ಅಂತರ - 11,409